# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಯೋಜನಾ, ಸಮಾಜ ಕಲ್ಯಾಣ, ಕೃಷಿ , ಜಲಾನಯನ, ರೇಷ್ಮೆ ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರ ಬಾಕಿ/ಪ್ರಸಕ್ತ ಸಾಲಿನ/ಬಾಕಿ ವೇತನ/ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ವಿವಿಧ ಜಿಲ್ಲಾ ಪಂಚಾಯತಿಗಳ ಹಾಗೂ ಅವುಗಳ ವ್ಯಾಪ್ತಿಯ ಯೋಜನಾ, ಸಮಾಜ ಕಲ್ಯಾಣ, **ಕೃಷಿ**, **ಜಲಾನಯನ**, **ರೇಷ್ಮೆ** ಮತ್ತು ಶಿಕ್ಷಣ ಇಲಾಖೆಯಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ , ದಿನಗೂಲಿ ನೌಕರರ ವೇತನ ಉಪದಾನ ಮತ್ತು ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆಗಾಗಿ ಪ್ರಧಾನ ಲೆಕ್ಕಶೀರ್ಷಿಕೆ:2202, 2225, 2435, 2402, 2851, 2515 ಮತ್ತು 3451ರಡಿ ಒಟ್ಟು ರೂ.65.28ಲಕ್ಷಗಳನ್ನು ಹೆಚ್ಚುವರಿಯಾಗಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ರೂ.65.28ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 464 ವೆಚ್ಚ 6/2021(ಇ) ದಿನಾಂಕ: 29ನೇ ಅಕ್ಟೋಬರ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ ಪ್ರಸಕ್ತ ಸಾಲಿನ ವೇತನ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.65.28ಲಕ್ಷ (ರೂಪಾಯಿ ಅರವತ್ತೈದು ಲಕ್ಷದ ಇಪ್ಪತ್ತೆಂಟು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು. ಯಾವುದೇ ಹಂತದಲ್ಲಿ ಅಂದರೆ ಮುಖ್ಯ ಲೆಕ್ಕಾಧಿಕಾರಿಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು. **ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.**

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಚಿತ್ರದುರ್ಗ | 2225–00–103–0–51–005 | 4.10 |
| 2 | ಧಾರವಾಡ | 2435–00–101–0–27–005 | 4.50 |
| | | 2851–00–107–0.27–005 | 3.51 |
| 3 | ದಕ್ಷಿಣ ಕನ್ನಡ | 3451–00–101–0–26–005 | 6.20 |
| 4 | ಕೋಲಾರ | 2402–00–104–0–26–005 | 23.00 |
| 5 | ಗದಗ್ | 2202–00–103–0–36–005 | 3.72 |
| 6 | ಬಾಗಲಕೋಟೆ | 3451–00–101–0–26–005 | 8.07 |
| 7 | ತುಮಕೂರು | 2225–00–103–0–34–005 | 6.98 |
| 8 | ಶಿವಮೊಗ್ಗ | 2515–00–101–0–26–021 | 5.20 |
| | ಒಟ್ಟು | | **65.28** |

1417215379
30.11.21

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ–2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು–2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪ.ಯೋಜನಾ/ಶಿಕ್ಷಣ/ಕೃಷಿ/ಜಲಾನಯನ/ಸಮಾಜ ಕಲ್ಯಾಣ ಇಲಾಖೆ
4. ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಪಟ್ಟ ಜಿಲ್ಲಾ ಖಜಾನಾಧಿಕಾರಿಗಳು,
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ